# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 227
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 14.12.2021
ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿನ ವಿಕಲಚೇತನರಿಗೆ ಇಲಾಖೆ ವತಿಯಿಂದ ರೂಪಿಸಿದ ಯೋಜನೆಗಳಾವವು; ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳಾವುವು; ಎಷ್ಟು ಯೋಜನೆಗಳು ಅನುಷ್ಠಾನಗೊಂಡಿಲ್ಲ; (ವಿವರಣೆ ನೀಡುವುದು)</td><td>ರಾಜ್ಯದಲ್ಲಿನ ವಿಕಲಚೇತನರಿಗೆ ಇಲಾಖಾ ವತಿಯಿಂದ ರೂಪಿಸಿದ ಯೋಜನೆಗಳ ಹಾಗೂ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾಹಿತಿಯನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ. ಎಲ್ಲಾ ಯೋಜನೆಗಳು ಅನುಷ್ಠಾನಗೊಳ್ಳುತ್ತಿವೆ.</td></tr>
<tr><td>ಆ</td><td>ಕಳೆದ 03 ವರ್ಷಗಳಲ್ಲಿ ರಾಜ್ಯದ ಎಷ್ಟು ಜನ ಫಲಾನುಭವಿಗಳು ಈ ಯೋಜನೆಯ ಸೌಲಭ್ಯವನ್ನು ಪಡೆದಿದ್ದಾರೆ: (ತಾಲ್ಲೂಕುವಾರು ಹಾಗೂ ಯೋಜನೆವಾರು ಮಾಹಿತಿ ನೀಡುವುದು)</td><td>ಜಿಲ್ಲಾವಾರು ಹಾಗೂ ಯೋಜನೆವಾರು ಮಾಹಿತಿಯ ವಿವಿರ ಅನುಬಂಧ-02ರಲ್ಲಿ ಲಗತ್ತಿಸಿದೆ. ತಾಲ್ಲೂಕುವಾರು ಅನುದಾನವನ್ನು ಬಿಡುಗಡೆ ಮಾಡುವುದಿಲ್ಲ.</td></tr>
<tr><td>ಇ</td><td>ಕಳೆದ 03 ವರ್ಷಗಳಲ್ಲಿ ಸರ್ಕಾರವು ವಿಕಲಚೇತನರ ಅಭಿವೃದ್ಧಿ ಮಂಜೂರಾಗಿರುವ ಅನುದಾನ ಎಷ್ಟು; ಇಲ್ಲಿಯವರೆಗೆ ಬಳಕೆಯಾದ ಹಾಗೂ ಬಳಕೆಯಾಗದ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)</td><td>ವಿಕಲಚೇತನರ ಅಭಿವೃದ್ಧಿಗೆ ಮಂಜೂರಾದ ಅನುದಾನ<br>(ರೂ. ಲಕ್ಷಗಳಲ್ಲಿ)<br><table><tr><th>ವರ್ಷ</th><th>ಮಂಜೂರಾದ ಅನುದಾನ</th><th>ಬಳಕೆಯಾದ ಅನುದಾನ</th><th>ಬಳಕೆಯಾಗದ ಅನುದಾನ</th></tr><tr><td>2018-19</td><td>126001.22</td><td>119914.69</td><td>6086.53</td></tr><tr><td>2019-20</td><td>19546.25</td><td>15999.54</td><td>3546.71</td></tr><tr><td>2020-21</td><td>19938.31</td><td>16780.88</td><td>3157.43</td></tr></table><br>ಸಂಪೂರ್ಣ ಮಾಹಿತಿಯನ್ನು ಅನುಬಂಧ-03ರಲ್ಲಿ ಲಗತ್ತಿಸಿದೆ.</td></tr>
<tr><td>ಈ</td><td>ಗ್ರಾಮಾಂತರ ಪ್ರದೇಶದ ವಿಕಲಚೇತನರಿಗೆ ಪರಿಣಾಮಕಾರಿಯಾಗಿ ಸೌಲಭ್ಯವನ್ನು ತಲುಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ವಿಕಲಚೇತನರಿಗಾಗಿ ರೂಪಿಸಿದ ಈಗಿನ ಮತ್ತು ಮುಂದಿನ ಯೋಜನೆಗಳಾವುವು?</td><td>• ಗ್ರಾಮಾಂತರ ಪ್ರದೇಶದ ವಿಕಲಚೇತನರಿಗೆ ಪರಿಣಾಮಕಾರಿಯಾಗಿ ಇಲಾಖಾ ಸೌಲಭ್ಯಗಳನ್ನು ತಲುಪಿಸಲು ಗ್ರಾಮಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು, ತಾಲ್ಲೂಕು ಮಟ್ಟದಲ್ಲಿ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ನೇಮಿಸಿದ್ದು, ಇವರುಗಳ ಮುಖಾಂತರ ಇಲಾಖಾ ಸೌಲಭ್ಯಗಳನ್ನು ವಿಕಲಚೇತನರಿಗೆ ಅವರುಗಳು ವಾಸಿಸುವ ಸ್ಥಳದಲ್ಲಿಯೇ ಒದಗಿಸಲು ಕ್ರಮವಹಿಸಲಾಗಿದೆ.<br>• ವಿಕಲಚೇತನರಿಗಾಗಿ ರೂಪಿಸಿರುವ ಈಗಿನ ಮತ್ತು ಮುಂದಿನ ಯೋಜನೆಗಳನ್ನು ಅನುಬಂಧ-04ರಲ್ಲಿ ಒದಗಿಸಲಾಗಿದೆ.</td></tr>
</table>

ಸಂಖ್ಯೆ: ಮಮಇ 262 ಪಿಹೆಚ್‌ಪಿ 2021

Halappa BA

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.

# ಅನುಬಂಧ-01

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ವಿಕಲಚೇತನರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು

### (ಎ) ಶೈಕ್ಷಣಿಕ ಯೋಜನೆಗಳು:-

### 1) ಶ್ರವಣದೋಷವುಳ್ಳ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:

- ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ. ಇತ್ತೀಚೆಗೆ ಬೆಂಗಳೂರಿನಲ್ಲಿ ಶ್ರವಣದೋಷವುಳ್ಳ ಮಕ್ಕಳ ಶಾಲೆಯನ್ನು ಸರ್ಕಾರದಿಂದ ನಡೆಸಲಾಗುತ್ತಿದೆ.

### 2. ಅಂಧ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

### 3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

### 4. ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ. 1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.